ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

3

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE: 22/10/20

# ₹10000 ಕೋಟಿ ಕೊಡಿ

## ವಿಶೇಷ ನೆರೆ ಪ್ಯಾಕೇಜ್‌ಗಾಗಿ ಮೋದಿಗೆ ಸಿಎಂ ಪತ್ರ

### 3 ಹಂತದಲ್ಲಿ ರಾಜ್ಯದಲ್ಲಿ ಪ್ರವಾಹ | ಒಟ್ಟಾರೆ ₹21,609 ಕೋಟಿ ಆಸ್ತಿಪಾಸ್ತಿ ನಷ್ಟ

• ಲಿಂಗರಾಜು ಕೋರಾ

**ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಕಳೆದ ಎರಡೂವರೆ ತಿಂಗಳಿಂದ ಉಂಟಾಗಿರುವ ಅತಿವೃಷ್ಟಿ ಹಾಗೂ ಪ್ರವಾಹ ಪರಿಸ್ಥಿತಿಯಿಂದ ಒಟ್ಟಾರೆ 21,609 ಕೋಟಿ ರು.ಗಳಷ್ಟು ನಷ್ಟವುಂಟಾಗಿದ್ದು ತುರ್ತು ಪರಿಹಾರವಾಗಿ 10 ಸಾವಿರ ಕೋಟಿ ರು. ವಿಶೇಷ ಪ್ಯಾಕೇಜ್ ಘೋಷಿಸುವಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಕೋರಿದ್ದಾರೆ.

ಮೋದಿ ಅವರು ಅ.16ರಂದು ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಕರೆಮಾಡಿ ಕರ್ನಾಟಕದಲ್ಲಿ ಉಂಟಾಗಿರುವ ಪ್ರವಾಹ ಪರಿಸ್ಥಿತಿ, ಮಳೆ ಹಾನಿ ಕುರಿತು ಚರ್ಚೆ ನಡೆಸಿ ಕೇಂದ್ರ ಸರ್ಕಾರದಿಂದ ಅಗತ್ಯ ನೆರವು ನೀಡುವ ಭರವಸೆ ನೀಡಿದ್ದರು.

ಇದಾದ ಮರುದಿನವೇ ಮುಖ್ಯಮಂತ್ರಿ ಅವರು ರಾಜ್ಯ ಎದುರಿಸುತ್ತಿರುವ ಪ್ರವಾಹ ಪರಿಸ್ಥಿತಿ, ಮಳೆ ಹಾನಿ ಹಾಗೂ ಇದರಿಂದಾದ ನಷ್ಟದ ಸಂಬಂಧ ಸಂಪೂರ್ಣ ವಿವರವನ್ನೊಳಗೊಂಡ ಮೂರು ಪುಟಗಳ ಪತ್ರವನ್ನು ಪ್ರಧಾನಿ ಅವರಿಗೆ ಬರೆದಿದ್ದು ತುರ್ತು ಪರಿಹಾರಕ್ಕೆ 10 ಸಾವಿರ ಕೋಟಿ ರು. ವಿಶೇಷ ಪ್ಯಾಕೇಜ್ ನೀಡುವಂತೆ ಕೋರಿದ್ದಾರೆ. (ಮುಖ್ಯಮಂತ್ರಿಯವರು ಪ್ರಧಾನಿಯವರಿಗೆ ಬರೆದಿರುವ ಪತ್ರದ ಪ್ರತಿ 'ಕನ್ನಡಪ್ರಭ'ಗೆ ಲಭ್ಯವಾಗಿದೆ.)

**3 ಹಂತದ ಅತಿವೃಷ್ಟಿ:** ಮುಖ್ಯಮಂತ್ರಿ ಅವರು ಬರೆದಿರುವ ಪತ್ರದಲ್ಲಿ ರಾಜ್ಯದಲ್ಲಿ ಇದುವರೆಗೂ ಮೂರು ಹಂತದಲ್ಲಿ ಅತಿವೃಷ್ಟಿ ಹಾಗೂ ನೆರೆ ಹಾನಿ ಉಂಟಾಗಿದೆ. ಆಗಸ್ಟ್‌ನಿಂದ ಸೆಪ್ಟೆಂಬರ್ 15ರವರೆಗೆ ಮೊದಲ ಹಂತದಲ್ಲಿ ಕರಾವಳಿ, ಮಲೆನಾಡು ಹಾಗೂ ಉತ್ತರ ಕರ್ನಾಟಕದ ವಿವಿಧ ಪ್ರದೇಶಗಳಲ್ಲಿ ಆದ ಮಳೆ ಹಾನಿಯಿಂದ 9,441 ಕೋಟಿ ರು. ನಷ್ಟವಾಗಿದೆ. ಸೆಪ್ಟೆಂಬರ್ ಉಳಿದಾರ್ಧದಲ್ಲಿ ವಿವಿಧ ಜಿಲ್ಲೆಗಳಲ್ಲಿ ಉಂಟಾದ ಎರಡನೇ ಹಂತದ ನೆರೆಯಿಂದ 5,668 ಕೋಟಿ ರು. ಹಾಗೂ ಪ್ರಸ್ತುತ ಅ.10ರಿಂದ ಕರಾವಳಿ ಮತ್ತು ಉತ್ತರ ಕರ್ನಾಟಕದ ಹಲವೆಡೆ ಉಂಟಾಗಿರುವ ಮೂರನೇ ಹಂತದ ಪ್ರವಾಹ ಪರಿಸ್ಥಿತಿಯಿಂದ ಅಂದಾಜು 6,500 ಕೋಟಿ ರು. ನಷ್ಟ ಹಾನಿಯಾಗಿದೆ.

↘ 10



ಕಲಬುರಗಿಯಲ್ಲಿ ಬುಧವಾರ ಸಿಎಂ ಯಡಿಯೂರಪ್ಪ ಅವರು ನೆರೆ ಹಾನಿ ಸಮೀಕ್ಷೆ ನಡೆಸಿದರು.

## 3 ಜಿಲ್ಲೆಗಳಲ್ಲಿ ಸಿಎಂ ವೈಮಾನಿಕ ಸಮೀಕ್ಷೆ

### ಕಲಬುರಗಿ, ಬೀದರ್, ಯಾದಗಿರಿಯಲ್ಲಿ ನೆರೆ ಹಾನಿ ಪರಿಶೀಲಿಸಿದ ಸಿಎಂ

### ಸುಮಾರು 1 ಗಂಟೆ ಕಾಲ ಸಮೀಕ್ಷೆ | ನಂತರ ಅಧಿಕಾರಿಗಳ ಜತೆಗೆ ಸಭೆ

• **ಕನ್ನಡಪ್ರಭ ವಾರ್ತೆ** ಕಲಬುರಗಿ

ಕೆಲವು ದಿನಗಳಿಂದ ಸುರಿದ ಭಾರೀ ಮಳೆ, ಭೀಮಾ ನದಿ ಪ್ರವಾಹದಿಂದ ತತ್ತರಿಸಿರುವ ಕಲಬುರಗಿ, ಯಾದಗಿರಿ ಹಾಗೂ ಬೀದರ್ ಜಿಲ್ಲೆಗಳಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಬುಧವಾರ 1 ಗಂಟೆ ಕಾಲ ವೈಮಾನಿಕ ಸಮೀಕ್ಷೆ ನಡೆಸಿದರು. ಈ 3 ಜಿಲ್ಲೆಗಳ ಜತೆಗೆ ವಿಜಯಪುರ, ರಾಯಚೂರಿನಲ್ಲೂ ಮುಖ್ಯಮಂತ್ರಿಗಳು ವೈಮಾನಿಕ ಸಮೀಕ್ಷೆ ನಡೆಸಬೇಕಿತ್ತಾದರೂ ಹವಾಮಾನ ವೈಪರೀತ್ಯದಿಂದಾಗಿ ಆ ಕಾರ್ಯಕ್ರಮವನ್ನು ರದ್ದುಮಾಡಬೇಕಾಯಿತು.

ಬಳ್ಳಾರಿಯಿಂದ ಕಲಬುರಗಿಗೆ ಮಧ್ಯಾಹ್ನ 1ಕ್ಕೆ ಆಗಮಿಸಿದ್ದ ಯಡಿಯೂರಪ್ಪ ಅವರು ಸೇನಾ ಹೆಲಿಕಾಪ್ಟರ್‌ನಲ್ಲಿ ಭೀಮಾ, ಡೋಣಿ ನದಿ ಪ್ರವಾಹದಿಂದ ತತ್ತರಿಸಿದ್ದ ಕಲಬುರಗಿ, ಯಾದಗಿರಿ ಮತ್ತು ಮಳೆಯಿಂದ ಜರ್ಝರಿತವಾಗಿರುವ ಬೀದರ್‌ನಲ್ಲಿ ಹಾನಿ ಪರಿಶೀಲನೆ ನಡೆಸಿದರು.

↘ 10